ಅ.ದಾ.2/2019 ಡಿಡಬ್ಲ್ಯೂ-1

ದಿನಾಂಕಃ 18.08.2025 ರಂದು ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲು: ವಾದಿ ಪರ ಶ್ರೀ ಎ.ಕೆ.ಎಸ್. ವಕೀಲರಿಂದ:**

ನಾನು ದ್ವಿತಿಯ ಪಿ.ಯು.ಸಿವರೆಗೆ ವ್ಯಾಸಂಗ ಮಾಡಿರುತ್ತೇನೆ. ನಾನು ವಾದಿಯವರ ವಿರುದ್ಧ 1999 ನೇ ಸಾಲಿನಲ್ಲಿ ಅಸಲು ದಾವಾ ಸಂ.149/1999 ಅಡಿಯಲ್ಲಿ ಪ್ರಕರಣ ದಾಖಲಿಸಿದ್ದೆ ಎಂದರೆ ಸರಿ. ನಾನು ಮತ್ತು ವಾದಿ ಅಣ್ಣ ತಮ್ಮಂದಿರು ಎಂದರೆ ಸರಿ. 1999 ನೇ ಸಾಲಿನಲ್ಲಿ ನನ್ನ ತಂದೆ ಬದುಕಿದ್ದರು ಎಂದರೆ ಸರಿ. ನಿಪಿ-6 ರಂತೆ 1999 ನೇಸಾಲಿನಲ್ಲಿ ವಾದಿ ಮತ್ತು ತಹಶೀಲ್ದಾರ್ ರವರ ವಿರುದ್ಧ ನಾನು ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿ. ಸದರಿ ಪ್ರಕರಣದಲ್ಲಿ ವಾದಿಯವರಿಗೆ ಮಾಡಲಾಗಿದ್ದ ದಾನ ಪತ್ರವನ್ನು ರದ್ದುಪಡಿಸುವಂತೆ ಕೋರಲಾಗಿತ್ತು ಎಂದರೆ ಸರಿ. ಸದರಿ ಪ್ರಕರಣವೂ ದಿ.14.08.2002 ರಂತೆ ವಜಾ ಆಗಿರುತ್ತದೆ ಎಂದರೆ ಸರಿಯಲ್ಲ. ನಾನು ಪ್ರಸ್ತುತ ಪ್ರಕರಣದ ದಾಖಲಾತಿಗಳನ್ನು ಓದಿ ಪ್ರಕರಣದ ಮಾಹಿತಿಯನ್ನು ತಿಳಿದುಕೊಂಡಿರುತ್ತೇನೆ ಮತ್ತು ವಾದಿಗಳು ಹಾಜರುಪಡಿಸಿರುವ ದಾಖಲಾತಿಗಳನ್ನು ಪರಿಶೀಲಿಸಿರುತ್ತೇನೆ. ನಿಪಿ-6 ರಂತೆ ಮೂಡಿಗೆರೆ ನ್ಯಾಯಾಲಯದಲ್ಲಿ ನಾನು ಹೂಡಿದ್ದ ಪ್ರಕರಣ ವಜಾಗೊಂಡಿರುತ್ತದೆ ಎಂದರೆ ಸರಿ. ನಾನು ಹಾಕಿದ್ದ ಪ್ರಕರಣವೂ ವಜಾಗೊಂಡಿರುವುದಿಲ್ಲ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸಾಕ್ಷಿಯು ನನಗೆ ಪ್ರಶ್ನೆ ಅರ್ಥವಾಗದೇ ಇದ್ದ ಕಾರಣ ಅರ್ಥ ಮಾಡಿಕೊಂಡು ಉತ್ತರಿಸಿರುತ್ತೇನೆ ಎಂದು ನುಡಿಯುತ್ತಾರೆ. ಅಸಲು ದಾವಾ ಸಂ.149/1999 ಪ್ರಶ್ನಿಸಿ ನಾನು ಮೇಲ್ಮನವಿಯನ್ನು ಸಲ್ಲಿಸಿರುತ್ತೇನೆ.

**ಮುಂದುವರೆದ ಪಾಟೀ ಸವಾಲಿಗೆ ಕಾಲವಕಾಶ ಕೋರಿದ್ದು ನೀಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,
ಮೂಡಿಗೆರೆ.